ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಪೋಡಿ ಪ್ರಕರಣಗಳ ಬಗ್ಗೆ

ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

272 (352) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಂದಾಯ ಇಲಾಖೆಯಲ್ಲಿ ಬಾಕಿ ಇರುವ ಪೋಡಿ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಕಂದಾಯ ಇಲಾಖೆಯಲ್ಲಿ ಪೋಡಿಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಹಾಗೂ ಕಳೆದ 5 ವರ್ಷಗಳಿಂದ ರಾಜ್ಯದಲ್ಲಿ ಬಾಕಿ ಇರುವ ಪ್ರಕರಣಗಳು ಎಷ್ಟು ;

(ಇ) ಕಳೆದ 5 ವರ್ಷಗಳಿಂದ ರಾಜ್ಯದ ಕಂದಾಯ ಇಲಾಖೆಯಲ್ಲಿ ಜಮೀನು ಪೋಡಿಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಹಾಗೂ ಈ ಸಂಬಂಧ ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು; (ವಿವರಗಳನ್ನು ತಾಲ್ಲೂಕುವಾರು, ಜಿಲ್ಲಾವಾರು ನೀಡುವುದು)

(ಈ) ಇಷ್ಟು ಪ್ರಮಾಣದಲ್ಲಿ ಪೋಡಿ ಪ್ರಕರಣಗಳು ಬಾಕಿ ಇರಲು ಕಾರಣವೇನು;

(ಉ) ಬೆಂಗಳೂರು ನಗರ ಜಿಲ್ಲೆಯಲ್ಲಿ ಪೋಡಿಗಾಗಿ ಬಂದ ಅರ್ಜಿಗಳನ್ನು ವಿಲೇವಾರಿ ಮಾಡಲು ಸಂಬಂಧಪಟ್ಟ ಅಧಿಕಾರಿಗಳು ಲಕ್ಷಾಂತರ ರೂಪಾಯಿ ಬೇಡಿಕೆ ಇಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದರೆ, ಅಂತಹ ಪ್ರಕರಣಗಳು ಎಷ್ಟು ? (ವಿವರಗಳನ್ನು ನೀಡುವುದು)